## ▸ಸುರತ್ಕಲ್ ಎನ್ಐಟಿಕೆ: ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

# ಪರಿಸರ ಸಹ್ಯ ಬೆಳವಣಿಗೆಗಾಗಿ ಆವಿಷ್ಕಾರ ನಡೆಯಲಿ

**ಸುರತ್ಕಲ್, ನ. 28:** ಎನ್ಐಟಿಕೆ ಸುರತ್ಕಲ್ ತನ್ನ 22ನೇ ವಾರ್ಷಿಕ ಘಟಿಕೋತ್ಸವದಲ್ಲಿ ಅಂಡರ್ ಗ್ರಾಜ್ಯುವೆಟ್ ಶಿಕ್ಷಣ ಪೂರೈಸಿದ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ನಡೆಯಿತು.

ಬಾಹ್ಯಾಕಾಶ ಆಯೋಗದ ಸದಸ್ಯ ಮತ್ತು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್ ಅವರು ಪದವಿ ಪ್ರದಾನಿಸಿ, ಕೇವಲ ಆರ್ಥಿಕ ಲಾಭಕ್ಕಾಗಿ ನೈಸರ್ಗಿಕ ಸಂಪನ್ಮೂಲಗಳನ್ನು ಅತಿಯಾಗಿ ಬಳಸಿಕೊಳ್ಳದೆ ಸುಸ್ಥಿರ, ಪರಿಸರ ಸಹ್ಯ ಬೆಳವಣಿಗೆಗಾಗಿ ಹೊಸ ಆವಿಷ್ಕಾರಗಳನ್ನು ಮಾಡಲು ಜ್ಞಾನವನ್ನು ಬಳಸಿಕೊಳ್ಳುವ ಅಗತ್ಯವಿದೆ. ವಿದ್ಯಾರ್ಥಿಗಳು ಈ ಹಿನ್ನೆಲೆಯಲ್ಲಿ ಸಂಶೋಧನ ಅಭಿವೃದ್ಧಿಯೆಡೆ ಗಮನ ನೀಡಬೇಕು.



ಐಐಟಿ ಜೋಧಪುರದ ನಿರ್ದೇಶಕ ಪ್ರೊ. ಅವಿನಾಶ್ ಕುಮಾರ್ ಅಗರ್ವಾಲ್ ಅವರು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಯಲ್ಲಿ ಸ್ನಾತಕೋತ್ತರ ಅಧ್ಯಯನಕ್ಕೆ ಅವಕಾಶ ಕಲ್ಪಿಸುವ ಬಗ್ಗೆ ಒಪ್ಪಂದಕ್ಕೆ ಸಹಿ ಹಾಕಿದರು. ಅಧ್ಯಕ್ಷತೆಯನ್ನು ಎನ್ಐಟಿಕೆಯ ಬಿಒಜಿ ನಿರ್ದೇಶಕ ಮತ್ತು ಅಧ್ಯಕ್ಷ ಪ್ರೊ. ಬಿ. ರವಿ ವಹಿಸಿದ್ದರು. ಸಮಾರಂಭದಲ್ಲಿ ಸೆನೆಟರ್‌ಗಳು, ಬೋಧಕರು, ಸಂಸ್ಥೆಯ ಸಿಬಂದಿ ಸದಸ್ಯರು, ವಿದ್ಯಾರ್ಥಿಗಳು ಮತ್ತು ಅವರ ಹೆತ್ತವರು ಭಾಗವಹಿಸಿದ್ದರು.

Udayavani, Date: 29/11/24, p, no - 04